ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/1/ಇಎಸ್ ಟಿ(3)/2024 | 1611

ಆಯುಕ್ತರ ಕಚೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು 01,ದಿನಾಂಕ:04.01.2025

## ಸುತ್ತೋಲೆ

ವಿಷಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಸ್ಥೆಗಳಲ್ಲಿನ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿರುವ ಬಗ್ಗೆ.

ಉಲ್ಲೇಖ
1. ಈ ಕಛೇರಿ ಅಧಿಸೂಚನೆ ಸಂ: DTE-ADMI0EST(3)/1/2024-JD-, ದಿ:18.10.2024.
2. ಈ ಕಛೇರಿ ಸುತ್ತೋಲೆ ಸಂ: DTE-ADMI0EST(3)/1/2024-JD-, ದಿ:16.11.2024.
3. ಪ್ರಾಂಶುಪಾಲರ ದೂರವಾಣಿ ಕರೆಗಳು ಹಾಗೂ ಪತ್ರಗಳು.

******

ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಸ್ಥೆಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ, ಅತಿಥಿ ಉಪನ್ಯಾಸಕರ ನೇಮಕಾತಿ ಕುರಿತು ಕೆಲವು ಸ್ಪಷ್ಟೀಕರಣಗಳನ್ನು ಕೋರಿ ಅನೇಕ ಪ್ರಾಂಶುಪಾಲರು ಆಯುಕ್ತಾಲಯಕ್ಕೆ ದೂರವಾಣಿ ಕರೆಗಳನ್ನು ಮಾಡುತ್ತಿದ್ದು, ತತ್ಸಂಬಂಧ ಈ ಕೆಳಕಂಡಂತೆ ಸ್ಪಷ್ಟೀಕರಿಸಲಾಗಿದೆ.

- ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಸ್ಥೆಗಳಲ್ಲಿ ಅತಿಥಿ ಉಪನ್ಯಾಸಕರು ನೇಮಕಗೊಂಡು ಗರಿಷ್ಟ ಕಾರ್ಯಭಾರ ಲಭ್ಯವಿಲ್ಲದಿದ್ದಲ್ಲಿ, ಇತರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸಿದ್ದಲ್ಲಿ ಕೌನ್ಸಿಲಿಂಗ್/Retain ಮೂಲಕ ನೇಮಕ ಮಾಡಿಕೊಂಡ ಕಾಲೇಜಿನವರು ಅತಿಥಿ ಉಪನ್ಯಾಸಕರು ಇತರೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿದ ಮಾಹಿತಿ ಪಡೆದು ವೇತನ ಪಾವತಿಸಲು ಕ್ರಮಕೈಗೊಳ್ಳಲು ಸೂಚಿಸಲಾಗಿದೆ.
- ಈಗಾಗಲೆ ಅತಿಥಿ ಉಪನ್ಯಾಸಕರು ನೇಮಕಗೊಂಡು ರಾಜಿನಾಮೆ ನೀಡಿದ್ದಲ್ಲಿ, ಸದರಿ ಅತಿಥಿ ಉಪನ್ಯಾಸಕರುಗಳ ಹುದ್ದೆಗೆ ಎದುರಾಗಿ ಪ್ರಾಂಶುಪಾಲರ ಹಂತದಲ್ಲಿ ಸಮಿತಿಯನ್ನು ರಚಿಸಿಕೊಂಡು ನಿಯಮಾನುಸಾರ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವುದು.

Manjula
ಆಯುಕ್ತರು
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ,
4/1/25

ಪ್ರತಿ:-
1. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ (ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ)
2. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು

CamScanner